




ದಿನಾಂಕ: 20-06-2023 ರಂದು ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಜಿಲ್ಲಾಡಳಿತ ಭವನ ಎದುರಿನ ಪರಿಸರ ಲೇಔಟ್‌ನಲ್ಲಿ ಆಧುನಿಕ ತಂತ್ರಜ್ಞಾನದೊಂದಿಗೆ ನಿರ್ಮಿಸಿದ ಭಾರತರತ್ನ ಪಂಡಿತ ಭೀಮಸೇನ್ ಜೋಶಿ ರಂಗ ಮಂದಿರವನ್ನು ಮಾನ್ಯ ಸಭಾಪತಿಯವರಾದ ಶ್ರೀ ಬಸವರಾಜ ಎಸ್ ಹೊರಟ್ಟಿ ಹಾಗೂ ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಪ್ರವಾಸೋದ್ಯಮ ಸಚಿವರಾದ ಎಚ್.ಕೆ ಪಾಟೀಲ ಅವರು ದೀಪ ಬೆಳಗಿಸುವ ಮೂಲಕ ಲೋಕಾರ್ಪಣೆಗೊಳಿಸಿದರು. ಇದೇ ಸಂದರ್ಭದಲ್ಲಿ ಮಾನ್ಯ ಸಭಾಪತಿಯವರಿಗೆ ಭಾರತರತ್ನ ಪಂಡಿತ ಭೀಮಸೇನ್ ಜೋಶಿ ಅವರ ಭಾವಚಿತ್ರ ನೀಡಿ ಸನ್ಮಾನಿಸಲಾಯಿತು.

ಲೋಕಾರ್ಪಣೆ ಕಾರ್ಯಕ್ರಮಕ್ಕೆ ವಿಶೇಷ ಅತಿಥಿಗಳಾಗಿ ಆಗಮಿಸಿದ ಮುಂಬೈನ ಖ್ಯಾತ ಕೊಳಲುವಾದಕ ರಾಕೇಶ ಚೌರಾಸಿಯಾ ಹಾಗೂ ಪುಣೆಯ ಖ್ಯಾತ ತಬಲಾ ವಾದಕ ಪದ್ಮಶ್ರೀ ವಿಜಯ ಘಾಟೆ ಅವರುಗಳ ಸಂಗೀತ ಕಾರ್ಯಕ್ರಮ ನಡೆಯಿತು.